ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 978
2. ಸದಸ್ಯರ ಹೆಸರು :ಶ್ರೀ ಆರ್.ಧರ್ಮಸೇನ
3. ಉತ್ತರಿಸುವ ದಿನಾಂಕ :21.12.2021
4. ಉತ್ತರಿಸುವ ಸಚಿವರು :ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಡ್ಯದಲ್ಲಿರುವ ಮೈಷುಗರ್ ಸಕ್ಕರೆ ಕಾರ್ಖಾನೆ ವಿಚಾರದಲ್ಲಿ ಸರ್ಕಾರದ ನಿಲುವೇನು; ಸರ್ಕಾರವೇ ಈ ಕಾರ್ಖಾನೆಯನ್ನು ನಡೆಸಲಿದೆಯೇ: ಅಥವಾ ಖಾಸಗಿಯವರಿಗೆ ವಹಿಸಿಕೊಡುವ ಆಲೋಚನೆ ಇದೆಯೇ: | ದಿ ಮೈಸೂರು ಷುಗರ್ ಕಂಪನಿ ಲಿ, ಮಂಡ್ಯ- ಈ ಕಾರ್ಖಾನೆಯನ್ನು ಎರಡು ವರ್ಷಗಳ ಅವಧಿಗೆ ಪ್ರಾಯೋಗಿಕವಾಗಿ ಸರ್ಕಾರಿ ಸ್ವಾಮ್ಯದಲ್ಲಿ ಪುನಶ್ಚೇತನಗೊಳಿಸಲು ದಿನಾಂಕ:18.10.2021ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ತೀರ್ಮಾನಿಸಲಾಗಿದೆ. |
| (ಆ) | ಹಿಂದೆ ಸರ್ಕಾರ ಕ್ರಿಯಾ ಯೋಜನೆ ಸಿದ್ದಪಡಿಸಿ ಈ ಕಾರ್ಖಾನೆಯನ್ನು ಪ್ರಾರಂಭ ಮಾಡಲು ಅನುದಾನ ಬಿಡುಗಡೆಗೊಳಿಸಿದ್ದರೂ, ಸದರಿ ಸಕ್ಕರೆ ಕಾರ್ಖಾನೆಯನ್ನು ಪ್ರಾರಂಭಿಸದಿರಲು ಕಾರಣವೇನು; | 2018-19ನೇ ಹಂಗಾಮಿನಲ್ಲಿ ಕೊನೆಯದಾಗಿ ದಿ ಮೈಸೂರು ಷುಗರ್ ಕಂಪನಿ ಲಿ, ಮಂಡ್ಯ - ಈ ಕಾರ್ಖಾನೆಯಲ್ಲಿ ಕಬ್ಬು ಅರೆಯುವ ಕಾರ್ಯವನ್ನು ನಿರ್ವಹಿಸಲಾಗಿದೆ. ದುಡಿಯುವ ಬಂಡವಾಳದ ಕೊರತೆಯಿಂದಾಗಿ ದಿ ಮೈಸೂರು ಷುಗರ್ ಕಂಪನಿ ಲಿ, ಮಂಡ್ಯ- ಈ ಕಾರ್ಖಾನೆಯಲ್ಲಿ 2019-20ನೇ ಹಂಗಾಮಿನಿಂದ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಲಾಗಿದೆ. ಕಬ್ಬು ಅರೆಯುವ ಉದ್ದೇಶಕ್ಕಾಗಿ 2019-20ನೇ ಸಾಲು ಮತ್ತು ನಂತರ ಸಾಲುಗಳಲ್ಲಿ ಈ ಕಾರ್ಖಾನೆಗೆ ಸರ್ಕಾರದಿಂದ ಅನುದಾನವನ್ನು ಬಿಡುಗಡೆಗೊಳಿಸಿರುವುದಿಲ್ಲ. |
| (ಇ) | ಈ ಭಾಗದಲ್ಲಿ ರೈತರು ಬೆಳೆಯುತ್ತಿರುವ ಕಬ್ಬನ್ನು ಯಾವ ರೀತಿಯಲ್ಲಿ ವಿಲೆ ಮಾಡಲು ಕ್ರಮಕೈಗೊಳ್ಳಲಾಗಿದೆ; ಕಬ್ಬು ಬೆಳೆದು ನಷ್ಟದಲ್ಲಿರುವ ರೈತರಿಗೆ ಯಾವ ರೀತಿ ಸಹಾಯ ಮಾಡಲು ಸರ್ಕಾರ ಉದ್ದೇಶಿಸಿದೆ? | ದಿ ಮೈಸೂರು ಷುಗರ್ ಕಂಪನಿ ಲಿ, ಮಂಡ್ಯ- ಈ ಕಾರ್ಖಾನೆಯಲ್ಲಿ 2019-20ನೇ ಹಂಗಾಮಿನಿಂದ ಕಬ್ಬು ಅರೆಯುವಿಕೆಯನ್ನು ಸ್ಥಗಿತಗೊಳಿಸಿರುವುದರಿಂದ, ಕಬ್ಬು ಬೆಳೆದ ರೈತರಿಗೆ ಉಂಟಾಗಬಹುದಾದ ನಷ್ಟವನ್ನು ತಪ್ಪಿಸುವುದಕ್ಕಾಗಿ, ಈ ಕಾರ್ಖಾನೆಯ ಕಬ್ಬು ಮೀಸಲು ಕ್ಷೇತ್ರದಲ್ಲಿ ಬೆಳೆದ ಅಂದಾಜು 7.00 ಲಕ್ಷ ಮೆ.ಟನ್ ಕಬ್ಬನ್ನು ಮಂಡ್ಯ ಜಿಲ್ಲೆಯಲ್ಲಿರುವ ಉಳಿದ 05 ಸಕ್ಕರೆ ಕಾರ್ಖಾನೆಗಳಿಗೆ ಹಂಚಿಕೆ ಮಾಡಿ ಸರ್ಕಾರದ ಆದೇಶ ಸಂಖ್ಯೆ: ಸಿಐ 240 ಸಿಓಎಫ್ 2021, ದಿನಾಂಕ:18.09.2021ರಲ್ಲಿ ಆದೇಶಿಸಲಾಗಿದೆ.<br>ದಿ ಮೈಸೂರು ಷುಗರ್ ಕಂಪನಿ ಲಿ, ಮಂಡ್ಯ - ಈ ಕಾರ್ಖಾನೆಯಲ್ಲಿ ಕಬ್ಬು ಅರೆಯುವ ಕಾರ್ಯವನ್ನು ಪ್ರಾರಂಭಿಸುವವರೆಗೆ ಮಾತ್ರ ಈ ಆದೇಶವು ಜಾರಿಯಲ್ಲಿರುತ್ತದೆ. |

**ಸಂಖ್ಯೆ: ಸಿಐ 366 ಸಿಓಎಫ್ 2021**

(ಶಂಕರ ಬಿ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು